# 03. ಭಗತ್ ಸಿಂಗ್

**ಜಲಿಯನ್ ವಾಲಭಾಗ್‌ನಲ್ಲಿ ಭಗತ್ ಸಿಂಗ್**



ಏಪ್ರಿಲ್ 13, 1919 ರಂದು ನಡೆದ ಜಲಿಯನ್ ವಾಲಾಬಾಗ್ ಹತ್ಯಾಕಾಂಡಲ್ಲಿ ಪ್ರಾಣ ಕಳೆದುಕೊಂಡಿದ್ದವರಿಗೆ ನಮನ ಸಲ್ಲಿಸಲು ಹೋಗಿದ್ದ ಭಗತ್‌ಸಿಂಗ್. **ಹನ್ನೆರಡು ವರ್ಷದ ಬಾಲಕ ಭಗತ್ ಸಿಂಗ್ ಅಮೃತಸರದ ಜಲಿಯನ್ ವಾಲಾಬಾಗ್‌ನಲ್ಲಿ ಮೂಕನಂತೆ ಅತ್ತಿಂದಿತ್ತ ಓಡಾಡುತ್ತಿದ್ದ. ತುಸು ಹೊತ್ತಿನ ನಂತರ ಭಗತ್ ಸಿಂಗ್ ಅಲ್ಲಿ ಒಂದೆಡೆ ಅಂತರ್ಮುಖಿಯಾಗಿ ಬಹುಕಾಲ ನಿಂತ. ನಂತರ ಅಲ್ಲಿದ್ದ ಸ್ವಲ್ಪ ಮಣ್ಣನ್ನು ತೆಗೆದುಕೊಂಡು ಹಣೆಗಿಟ್ಟುಕೊಂಡ. ಇನ್ನಷ್ಟು ಮಣ್ಣನ್ನು ತನ್ನಲ್ಲಿದ್ದ ಡಬ್ಬಿಯಲ್ಲಿ ಶೇಖರಿಸಿಕೊಂಡು ಮನೆಗೆ ಹಿಂತಿರುಗಿದನು.**

**ತ್ಯಾಗದ ಪ್ರತೀಕ ಮಣ್ಣು**

ಭಗತ್ ಸಿಂಗ್ ರಾತ್ರಿ ಮನೆಗೆ ಹಿಂತಿರುಗಿದಾಗ ಅವನ ಸಹೋದರಿ ಎಂದಿನಂತೆ ಅವನನ್ನು ಊಟಕ್ಕೆ ಎಬ್ಬಿಸಿದರೆ ಒಲ್ಲೆನೆಂದು ಮುಖ ತಿರುಗಿಸಿದ. ಅವನಿಗೆ ಪ್ರಿಯವಾದ ಮಾವಿನ ಹಣ್ಣೊಂದನ್ನು ಕೊಡಲು ಹೋದಾಗ ಅದನ್ನು ಕೂಡ ನಿರಾಕರಿಸಿ, ಅವಳನ್ನು ಮನೆಯ ಹಿಂಭಾಗಕ್ಕೆ ಕರೆದು ಕೊಂಡು ಹೋಗಿ ತನ್ನ ಡಬ್ಬಿಯಲ್ಲಿದ್ದ ಮಣ್ಣನ್ನು ತೋರಿಸಿದ. ರಕ್ತದಲ್ಲಿ ಕಲೆಸಿದಂತಿದ್ದ ಆ ಮಣ್ಣು ಎಲ್ಲಿಯದೆಂದು ತಿಳಿಯಿತು. ಆಗ ಅವನ ಉಪವಾಸಕ್ಕೆ ಕಾರಣವೇನೆಂದು ಅವಳಿಗೆ ಗೊತ್ತಾಯಿತು. ಭಗತ್ ಸಿಂಗ್ ತನ್ನ ಸಹೋದರಿಗೆ **"ತ್ಯಾಗದ ಪ್ರತೀಕ ಆ ಮಣ್ಣು"** ಎಂದು ತೋರಿಸಿದನು.

**ಜಲಿಯನ್ ವಾಲಾಬಾಗ್‌ನಲ್ಲಿರುವ ಒಕ್ಕಣೆ**

ಇಂದು ಜಲಿಯನ್ ವಾಲಾಬಾಗ್‌ನಲ್ಲಿರುವ ಒಕ್ಕಣೆ ಹೀಗಿದೆ: **"ಏಪ್ರಿಲ್ 13, 1919 ರಂದು ಬ್ರಿಟಿಷರ ಗುಂಡುಗಳಿಗೆ ಆಹುತಿಯಾದ ಸುಮಾರು 2000 ಮುಗ್ಧ ಹಿಂದೂ, ಸಿಖ್ ಮತ್ತು ಮುಸಲ್ಮಾನರ ಸಮ್ಮಿಳಿತ ರಕ್ತದಿಂದ ಈ ಪ್ರದೇಶ ಪಾವನವಾಗಿದೆ."** ಭಗತ್‌ಸಿಂಗ್ ಅಲ್ಲಿಗೆ ಹೋಗಿ ಅಂತರ್ಮುಖಿಯಾಗಿ ನಿಂತಾಗ ಈ ಭಾವನೆ ಅವನ ಮನಸ್ಸಿನಲ್ಲಿ ಹಾಯುತ್ತಿರಬೇಕು.

**ಜನರಲ್ ಡಯರ್‌ನ ಪೈಶಾಚಿಕ ಕೃತ್ಯ**

ಜಲಿಯನ್ ವಾಲಾಬಾಗ್‌ನಲ್ಲಿ ನೆರೆದಿದ್ದ ಜನಕ್ಕೆ ತಾವೊಂದು ರಾಜಕೀಯ ಆಂದೋಳನದಲ್ಲಿ ಭಾಗಿಗಳಾಗಬೇಕೆಂಬ ಆಕಾಂಕ್ಷೆಯಾಗಲಿ ಹುತಾತ್ಮರಾಗಬೇಕೆಂಬ ಅಭಿಲಾಷೆಯಾಗಲಿ ಇದ್ದಿರಲಾರದು. ಜನರಲ್ ಡಯರ್ ಸಹ ತನ್ನ ಪೈಶಾಚಿಕ ಘಾತುಕತೆಯನ್ನುಳಿದ ಬೇರಾವ ಭಾವನೆಯಿಂದಲೂ ಪ್ರೇರಿತನಾಗಿದ್ದ ಎಂದು ನಂಬುವುದು ಕಷ್ಟ. **ಕ್ರೂರ ಮಾರ್ಗದಿಂದ ಭಾರತೀಯರನ್ನೂ ಬಗ್ಗು ಬಡಿಯಬಹುದೆಂದು ಅವನ ಎಣಿಕೆ ಹಾಕಿಕೊಂಡಿದ್ದನು. ಜಲಿಯನ್ ವಾಲಾಬಾಗ್‌ನಲ್ಲಿ ನೆರೆದಿದ್ದ ಜನಸಮೂಹವನ್ನು ಕಂಡು ಬ್ರಿಟಿಷ್ ಸಾಮ್ರಾಜ್ಯದ ಅನವರತ ಏಳಿಗೆಗೆ ಇದಕ್ಕಿಂತಲೂ ಸುಲಭವಾದ ಮಾರ್ಗವನ್ನು ಚಿಂತಿಸಲು ಅವನು ಅಶಕ್ತನಾಗಿದ್ದ. ಒಟ್ಟು 1650 ಸುತ್ತುಗಳಷ್ಟು ಗುಂಡಿನ ಮಳೆ ಕರೆಯಿಸಿದ್ದನು. ಮುಗ್ಧ ಭಾರತೀಯರ ಪ್ರಾಣ ತೆಗೆಯುವ ಈ ಕ್ರೂರ ಪೈಶಾಚಿಕ ಕೃತ್ಯವನ್ನು ಮಾಡಿಸಿದನು.** ಇದನ್ನು ಅವನು ಹೆಮ್ಮೆಯಿಂದ ಹೇಳಿಕೊಂಡದ್ದು "ಒಂದೇ ಒಂದು ಗುಂಡು ಸಹ ದಂಡವಾಗಲಿಲ್ಲ" ಎಂದು. ಅಂದು ಪ್ರಾಣ ಕಳೆದುಕೊಂಡವರ ಸಂಖ್ಯೆ ಇದನ್ನು ಖಚಿತಗೊಳಿಸಿತ್ತು.

**ಅಮರನಾದ ಭಗತ್‌ಸಿಂಗ್**

ಜಲಿಯನ್ ವಾಲಾಬಾಗಿನ ರಕ್ತಸಿಕ್ತವಾಗಿದ್ದ ಮಣ್ಣನ್ನು ನಿಧಿಯಂತೆ ಕಾಪಾಡಿಕೊಂಡು ಬಂದಿದ್ದ ಬಾಲಕ ಭಗತ್‌ಸಿಂಗ್ ಮುಂದೆ ತನ್ನ ಕ್ರಾಂತಿಕಾರಿ ಗುಂಪಿನ ಸಹಾಯದಿಂದ ಬ್ರಿಟಿಷ್ ಸರ್ಕಾರದ ವಿರುದ್ಧ ತನ್ನ ಸೇಡನ್ನು ತೀರಿಸಿಕೊಳ್ಳುತ್ತಾನೆ. ಇದರ ಫಲವಾಗಿ ಮರಣ ದಂಡನೆಗೆ ಈಡಾಗಿ ತನ್ನ ಸಹಚರರಾದ ಸುಖ್‌ದೇವ್, ರಾಜ್‌ಗುರು, ಭಟುಕೇಶ್ವರ ದತ್ತರೊಂದಿಗೆ ಹಸನ್ಮುಖಿಯಾಗಿ ತಾಯಿ ಭಾರತಾಂಬೆಯ ಸ್ವಾತಂತ್ರ್ಯದ ಹಣತೆಗೆ ತೈಲವೆಂಬಂತೆ ವೀರಯೋಧನಾಗಿ ಅಮರನಾದನು.

ಇಂಕ್ವಿಲಾಬ್ ಜಿಂದಾಬಾದ್....!

**ಪ್ರಶ್ನೋತ್ತರಗಳು**

**ಅ) ಕೊಟ್ಟಿರುವ ಪ್ರಶ್ನೆಗಳಿಗೆ ಒಂದೊಂದು ವಾಕ್ಯಗಳಲ್ಲಿ ಉತ್ತರಿಸಿ.**

**1. ಜಲಿಯನ್ ವಾಲಾಬಾಗ್ ಹತ್ಯಾಕಾಂಡ ಎಂದು ನಡೆಯಿತು?**

**ಉತ್ತರ:** ಏಪ್ರಿಲ್ 13, 1919 ರಂದು ಜಲಿಯನ್ ವಾಲಾಬಾಗ್ ಹತ್ಯಾಕಾಂಡ ನಡೆಯಿತು.

**2. ಭಗತ್‌ಸಿಂಗ್ ತನ್ನ ಸಹೋದರಿಗೆ ಮಣ್ಣು ಯಾವುದರ ಪ್ರತೀಕ ಎಂದು ತೋರಿಸುತ್ತಾನೆ?**

**ಉತ್ತರ:** ಭಗತ್‌ಸಿಂಗ್ ತನ್ನ ಸಹೋದರಿಗೆ **"ಮಣ್ಣು ತ್ಯಾಗದ ಪ್ರತೀಕ"** ಎಂದು ತೋರಿಸುತ್ತಾನೆ.

**3. ಭಗತ್‌ಸಿಂಗ್‌ನ ಸಹಚರರು ಯಾರು?**

**ಉತ್ತರ:** ಭಗತ್‌ಸಿಂಗ್‌ನ ಸಹಚರರು ಸುಖ್‌ದೇವ್, ರಾಜ್‌ಗುರು, ಭಟುಕೇಶ್ವರ ದತ್ತ.

**4. ಭಗತ್‌ಸಿಂಗ್ ಜಲಿಯನ್ ವಾಲಾಬಾಗ್‌ಗೆ ಏಕೆ ಹೋಗಿದ್ದನು?**

**ಉತ್ತರ:** ಜಲಿಯನ್ ವಾಲಾಬಾಗ್ ಹತ್ಯಾಕಾಂಡದಲ್ಲಿ ಪ್ರಾಣ ಕಳೆದುಕೊಂಡಿದ್ದವರಿಗೆ ನಮನ ಸಲ್ಲಿಸಲು ಭಗತ್‌ಸಿಂಗ್ ಹೋಗಿದ್ದನು.

**5. ಜಲಿಯನ್ ವಾಲಾಬಾಗ್‌ನಲ್ಲಿ ನೆರೆದಿದ್ದ ಜನಕ್ಕೆ ಯಾವ ಆಕಾಂಕ್ಷೆಯಾಗಲಿ, ಅಭಿಲಾಷೆಯಾಗಲಿ ಇರಲಿಲ್ಲ ?**

**ಉತ್ತರ:** ಜಲಿಯನ್ ವಾಲಾಬಾಗ್‌ನಲ್ಲಿ ನೆರೆದಿದ್ದ ಜನಕ್ಕೆ ತಾವೊಂದು ರಾಜಕೀಯ ಆಂದೋಳನದಲ್ಲಿ ಭಾಗಿಗಳಾಗಬೇಕೆಂಬ ಆಕಾಂಕ್ಷೆಯಾಗಲಿ ಹುತಾತ್ಮರಾಗಬೇಕೆಂಬ ಅಭಿಲಾಷೆಯಾಗಲಿ ಇರಲಿಲ್ಲ.

**ಆ) ಕೊಟ್ಟಿರುವ ಪ್ರಶ್ನೆಗಳಿಗೆ ಮೂರು–ನಾಲ್ಕು ವಾಕ್ಯಗಳಲ್ಲಿ ಉತ್ತರಿಸಿ.**

**1. ಜಲಿಯನ್ ವಾಲಾಭಾಗ್ ನಲ್ಲಿರುವ ಒಕ್ಕಣೆ ಏನು?**

**ಉತ್ತರ:** ಜಲಿಯನ್ ವಾಲಾಬಾಗ್‌ನಲ್ಲಿರುವ ಒಕ್ಕಣೆ ಹೀಗಿದೆ. "ಏಪ್ರಿಲ್ 13, 1919 ರಂದು ಬ್ರಿಟಿಷರ ಗುಂಡುಗಳಿಗೆ ಆಹುತಿಯಾದ ಸುಮಾರು 2000 ಮುಗ್ಧ ಹಿಂದೂ, ಸಿಖ್ ಮತ್ತು ಮುಸಲ್ಮಾನರ ಸಮ್ಮಿಳಿತ ರಕ್ತದಿಂದ ಈ ಪ್ರದೇಶ ಪಾವನವಾಗಿದೆ."

**2. ಭಗತ್ ಸಿಂಗ್ ನ ಸಹೋದರಿಗೆ ಆತನ ಉಪವಾಸದ ಕಾರಣಗಳು ಹೇಗೆ ತಿಳಿದು ಬಂದವು?**

**ಉತ್ತರ:** ಭಗತ್ ಸಿಂಗ್ ರಾತ್ರಿ ಮನೆಗೆ ಹಿಂತಿರುಗಿದಾಗ ಅವನ ಸಹೋದರಿ ಎಂದಿನಂತೆ ಅವನನ್ನು ಊಟಕ್ಕೆ ಎಬ್ಬಿಸಿದರೆ ಒಲ್ಲೆನೆಂದು ಮುಖ ತಿರುಗಿಸಿದ. ಅವನಿಗೆ ಪ್ರಿಯವಾದ ಮಾವಿನ ಹಣ್ಣೊಂದನ್ನು ಕೊಡಲು ಹೋದಾಗ ಅದನ್ನು ಕೂಡ ನಿರಾಕರಿಸಿ, ಅವಳನ್ನು ಮನೆಯ ಹಿಂಭಾಗಕ್ಕೆ ಕರೆದುಕೊಂಡು ಹೋಗಿ ತನ್ನ ಡಬ್ಬಿಯಲ್ಲಿದ್ದ ಮಣ್ಣನ್ನು ತೋರಿಸಿದ. ರಕ್ತದಲ್ಲಿ ಕಲೆಸಿದಂತಿದ್ದ ಆ ಮಣ್ಣು ಎಲ್ಲಿಯದೆಂದು ತಿಳಿಯಿತು. ಆಗ ಅವನ ಉಪವಾಸಕ್ಕೆ ಕಾರಣವೇನೆಂದು ಅವಳಿಗೆ ಗೊತ್ತಾಯಿತು.

**3. ಜಲಿಯನ್ ವಾಲಾಭಾಗ್‌ಗೆ ಬಂದ ಬಾಲಕ ಭಗತ್ ಸಿಂಗ್ ಏನು ಮಾಡಿದನು?**

**ಉತ್ತರ:** ಜಲಿಯನ್ ವಾಲಾಬಾಗ್ ಹತ್ಯಾಕಾಂಡಲ್ಲಿ ಪ್ರಾಣ ಕಳೆದುಕೊಂಡಿದ್ದವರಿಗೆ ನಮನ ಸಲ್ಲಿಸಲು ಹೋಗಿದ್ದ ಭಗತ್‌ಸಿಂಗ್. ಹನ್ನೆರಡು ವರ್ಷದ ಬಾಲಕ ಭಗತ್ ಸಿಂಗ್ ಅಮೃತಸರದ ಜಲಿಯನ್ ವಾಲಾಬಾಗ್‌ನಲ್ಲಿ ಮೂಕನಂತೆ ಅತ್ತಿಂದಿತ್ತ ಓಡಾಡುತ್ತಿದ್ದ. ತುಸು ಹೊತ್ತಿನ ನಂತರ ಭಗತ್ ಸಿಂಗ್ ಅಲ್ಲಿ ಒಂದೆಡೆ ಅಂತರ್ಮುಖಿಯಾಗಿ ಬಹುಕಾಲ ನಿಂತ. ನಂತರ ಅಲ್ಲಿದ್ದ ಸ್ವಲ್ಪ ಮಣ್ಣನ್ನು ತೆಗೆದುಕೊಂಡು ಹಣೆಗಿಟ್ಟುಕೊಂಡ. ಇನ್ನಷ್ಟು ಮಣ್ಣನ್ನು ತನ್ನಲ್ಲಿದ್ದ ಡಬ್ಬಿಯಲ್ಲಿ ಶೇಖರಿಸಿಕೊಂಡು ಮನೆಗೆ ಹಿಂತಿರುಗಿದನು.

**4. ಭಗತ್‌ಸಿಂಗ್ ಜಲಿಯನ್ ವಾಲಾಭಾಗ್‌ಗೆ ಹೋಗಿ ಅಂತರ್ಮುಖಿಯಾಗಿ ನಿಂತಾಗ ಯಾವ ಭಾವನೆ ಅವನ ಮನಸ್ಸಿನಲ್ಲಿ ಹಾಯುತ್ತಿರಬೇಕು ಎಂದು ಲೇಖಕರು ಹೇಳುತ್ತಾರೆ?**

**ಉತ್ತರ:** ಭಗತ್‌ಸಿಂಗ್ ಜಲಿಯನ್ ವಾಲಾಭಾಗ್‌ಗೆ ಹೋಗಿ ಅಂತರ್ಮುಖಿಯಾಗಿ ನಿಂತಾಗ ಏಪ್ರಿಲ್ 13, 1919 ರಂದು ಬ್ರಿಟೀಷರ ಗುಂಡುಗಳಿಗೆ ಆಹುತಿಯಾದ ಸುಮಾರು 2000 ಮುಗ್ಧ ಹಿಂದೂ, ಸಿಖ್ ಮತ್ತು ಮುಸಲ್ಮಾನರ ಸಮ್ಮಿಳಿತ ರಕ್ತದಿಂದ ಈ ಪ್ರದೇಶ ಪಾವನವಾಗಿದೆ. ಈ ಭಾವನೆ ಅವನ ಮನಸ್ಸಿನಲ್ಲಿ ಹಾಯುತ್ತಿರಬೇಕು ಎಂದು ಲೇಖಕರು ಹೇಳುತ್ತಾರೆ.

**5. ಜನರಲ್ ಡಯರ್‌ನು ಜಲಿಯನ್ ವಾಲಾಭಾಗ್‌ನಲ್ಲಿ ಮಾಡಿಸಿದ ಪೈಶಾಚಿಕ ಕೃತ್ಯ ಎಂತಹದ್ದು ವಿವರಿಸಿ ?**

**ಉತ್ತರ:** ಕ್ರೂರ ಮಾರ್ಗದಿಂದ ಭಾರತೀಯರನ್ನೂ ಬಗ್ಗು ಬಡಿಯಬಹುದೆಂದು ಅವನ ಎಣಿಕೆ ಹಾಕಿಕೊಂಡಿದ್ದನು. ಜಲಿಯನ್ ವಾಲಾಬಾಗ್‌ನಲ್ಲಿ ನೆರೆದಿದ್ದ ಜನಸಮೂಹವನ್ನು ಕಂಡು ಬ್ರಿಟಿಷ್ ಸಾಮ್ರಾಜ್ಯದ ಅನವರತ ಏಳಿಗೆಗೆ ಇದಕ್ಕಿಂತಲೂ ಸುಲಭವಾದ ಮಾರ್ಗವನ್ನು ಚಿಂತಿಸಲು ಅವನು ಅಶಕ್ತನಾಗಿದ್ದ. ಒಟ್ಟು 1650 ಸುತ್ತುಗಳಷ್ಟು ಗುಂಡಿನ ಮಳೆ ಕರೆಯಿಸಿದ್ದನು. ಮುಗ್ಧ ಭಾರತೀಯರ ಪ್ರಾಣ ತೆಗೆಯುವ ಈ ಕ್ರೂರ ಪೈಶಾಚಿಕ ಕೃತ್ಯವನ್ನು ಮಾಡಿಸಿದನು.

**6. ಜನರಲ್ ಡಯರ್‌ನ ಕುರಿತು ಲೇಖಕರ ಅಭಿಪ್ರಾಯವೇನು ?**

**ಉತ್ತರ:** ಪೈಶಾಚಿಕ ಘಾತುಕತೆಯನ್ನುಳಿದ ಬೇರಾವ ಭಾವನೆಯಿಂದಲೂ ಪ್ರೇರಿತನಾಗಿರಲಿಲ್ಲ. ಮುಗ್ಧ ಭಾರತೀಯರನ್ನು ಕ್ರೂರ ಮಾರ್ಗದಿಂದ ಬಗ್ಗು ಬಡಿಯಬಹುದೆಂದು ಅವನು ಎಣಿಕೆ ಹಾಕಿಕೊಂಡಿದ್ದನು. ಬ್ರಿಟಿಷ್ ಸಾಮ್ರಾಜ್ಯದ ಅನವರತ ಏಳಿಗೆಗೆ ಕ್ರೂರ ಮಾರ್ಗವನ್ನು ಬಿಟ್ಟು ಸುಲಭವಾದ ಮಾರ್ಗವನ್ನು ಚಿಂತಿಸಲು ಅವನು ಅಶಕ್ತನಾಗಿದ್ದ. ಒಂದೇ ಒಂದು ಗುಂಡು ಸಹ ದಂಡವಾಗಲಿಲ್ಲ ಎಂದು ಹೆಮ್ಮೆ ಪಟ್ಟಿದ್ದನು.

**7. ರಕ್ತಸಿಕ್ತವಾಗಿದ್ದ ಮಣ್ಣನ್ನು ನಿಧಿಯಂತೆ ಕಾಪಾಡಿಕೊಂಡು ಬಂದಿದ್ದ ಬಾಲಕ ಭಗತ್‌ಸಿಂಗ್‌ನಿಗೆ ದೊರೆತ ಫಲವೇನು ?**

**ಉತ್ತರ:** ಜಲಿಯನ್ ವಾಲಾಬಾಗಿನ ರಕ್ತಸಿಕ್ತವಾಗಿದ್ದ ಮಣ್ಣನ್ನು ನಿಧಿಯಂತೆ ಕಾಪಾಡಿಕೊಂಡು ಬಂದಿದ್ದ ಬಾಲಕ ಭಗತ್‌ಸಿಂಗ್ ಮುಂದೆ ತನ್ನ ಕ್ರಾಂತಿಕಾರಿ ಗುಂಪಿನ ಸಹಾಯದಿಂದ ಬ್ರಿಟಿಷ್ ಸರ್ಕಾರದ ವಿರುದ್ಧ ತನ್ನ ಸೇಡನ್ನು ತೀರಿಸಿಕೊಳ್ಳುತ್ತಾನೆ. ಇದರ ಫಲವಾಗಿ ತನ್ನ ಸಹಚರರಾದ ಸುಖ್‌ದೇವ್, ರಾಜ್‌ಗುರು, ಭಟುಕೇಶ್ವರ ದತ್ತರೊಂದಿಗೆ ಮರಣ ದಂಡನೆಗೆ ಈಡಾಗಿ ಹಸನ್ಮುಖಿಯಾಗಿ ತಾಯಿ ಭಾರತಾಂಬೆಯ ಸ್ವಾತಂತ್ರ್ಯದ ಹಣತೆಗೆ ತೈಲವೆಂಬಂತೆ ವೀರಯೋಧನಾಗಿ ಅಮರನಾಗುತ್ತಾನೆ.

**8. ಭಗತ್ ಸಿಂಗ್ ವೀರಯೋಧನಾಗಿ ಅಮರನಾದದ್ದು ಹೇಗೆ ?**

**ಉತ್ತರ:** ಭಗತ್‌ಸಿಂಗ್ ಜಲಿಯನ್ ವಾಲಾಬಾಗಿನ ಘಟನೆಯಿಂದ ಆಕ್ರೋಶಿತನಾಗಿ ಕ್ರಾಂತಿಕಾರಿ ಗುಂಪಿನ ಸಹಾಯದಿಂದ ಬ್ರಿಟಿಷ್ ಸರ್ಕಾರದ ವಿರುದ್ಧ ತನ್ನ ಸೇಡನ್ನು ತೀರಿಸಿಕೊಳ್ಳುತ್ತಾನೆ. ಇದರ ಫಲವಾಗಿ ತನ್ನ ಸಹಚರರಾದ ಸುಖ್‌ದೇವ್, ರಾಜ್‌ಗುರು, ಭಟುಕೇಶ್ವರ ದತ್ತರೊಂದಿಗೆ ಮರಣ ದಂಡನೆಗೆ ಈಡಾಗಿ ಹಸನ್ಮುಖಿಯಾಗಿ ತಾಯಿ ಭಾರತಾಂಬೆಯ ಸ್ವಾತಂತ್ರ್ಯದ ಹಣತೆಗೆ ತೈಲವೆಂಬಂತೆ ವೀರಯೋಧನಾಗಿ ಅಮರನಾಗುತ್ತಾನೆ.